# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಸ್.ಎಸ್.ತಡಲಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ(ನಿವೃತ್ತ), ಮಿಣಜಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/5676/2013/PP, ದಿನಾಂಕ:28.12.2016
2) ಸರ್ಕಾರದ ಅನಧಿಕೃತ ಟಿಪ್ಪಣಿ, ದಿನಾಂಕ 23.01.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 20.12.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ವೀರಭದ್ರಪ್ಪ ಹೀರಬಸಪ್ಪ ಗುಳೆದಗುಡ್ಡ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಬಾಗಳಗನೂರಿನ ಶ್ರೀ ಶಿವಶಂಕರ ನೇಕಾರ ಉತ್ಪಾದನಾ ಹಾಗೂ ಮಾರಾಟ ಸಹಕಾರ ಸಂಘ ನಿಯಮಿತ, ಬಳಗಾನೂರ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ವತಿಯಿಂದ ಸರ್ಕಾರದಿಂದ ಬಿಡುಗಡೆ ಮಾಡಲಾದ ವಿದ್ಯಾರ್ಥಿ ವೇತನದ ಹಣವನ್ನು ಮತ್ತು ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ನೇಕಾರರಿಗೆ ನೀಡಲಾಗುವ ವಿನಾಯತಿ (ರೀಬೇಟ್) ಹಣವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆಂದು ಹಾಗೂ ಸದಸ್ಯರಿಗೆ ಯಾವುದೇ ರೀತಿಯ ಸವಲತ್ತನ್ನು ಒದಗಿಸಿಲ್ಲವೆಂದು ದೂರಿದ್ದು, ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾದ್ದು, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಎಸ್.ಎಸ್.ತಡಲಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ(ನಿವೃತ್ತ), ಮಿಣಜಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ)(i) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಕರ್ನಾಟಕ ಕೋ-ಆಪರೇಟಿವ್ ಸೊಸೈಟೀಸ್ ಆಕ್ಟ್ ಅಡಿಯಲ್ಲಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬಂದಿರುವುದರಿಂದ ಶ್ರೀ ಪಂಪಾಪತಿ ಚನಮಲ್ಲಪ್ಪ ಹಂದಿಗನೂರ, ಅಧ್ಯಕ್ಷರು ಹಾಗೂ ಶ್ರೀ ಚಂದ್ರಶೇಖರ ಅ ಮುಂಡಾಸ, ಕಾರ್ಯದರ್ಶಿ – ಶ್ರೀ ಶಿವಶಂಕರ ನೇಕಾರ ಉತ್ಪಾದನಾ ಹಾಗೂ ಮಾರಾಟ ಸಹಕಾರ ಸಂಘ ನಿಯಮಿತ, ಬಳಗಾನೂರ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಲೋಕಾಯುಕ್ತ ವರದಿಯ ಶಿಫಾರಸ್ಸಿನಂತೆ, ಪ್ರಕರಣದಲ್ಲಿ ಭಾಗಿಯಾಗಿರುವ ಶ್ರೀ ಪಂಪಾಪತಿ ಚನಮಲ್ಲಪ್ಪ ಹಂದಿಗನೂರ, ಅಧ್ಯಕ್ಷರು ಹಾಗೂ ಶ್ರೀ ಚಂದ್ರಶೇಖರ ಅ ಮುಂಡಾಸ, ಕಾರ್ಯದರ್ಶಿ – ಶ್ರೀ ಶಿವಶಂಕರ ನೇಕಾರ ಉತ್ಪಾದನಾ ಹಾಗೂ ಮಾರಾಟ ಸಹಕಾರ ಸಂಘ ನಿಯಮಿತ, ಬಳಗಾನೂರ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರುಗಳ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

ಹಾಗೂ ಎದುರುದಾರರಾದ ಶ್ರೀ ಎಸ್.ಎಸ್.ತಡಲಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ(ನಿವೃತ್ತ), ಮಿಣಜಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ)(i) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 15 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 23.01.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಸ್.ಎಸ್.ತಡಲಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ(ನಿವೃತ್ತ), ಮಿಣಜಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮ 214(2)(ಬಿ)(i) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ 214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   *(ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)*
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ಮುದ್ದೇಬಿಹಾಳ ತಾಲ್ಲೂಕು ಪಂಚಾಯತಿ, ಮುದ್ದೇಬಿಹಾಳ, ವಿಜಯಪುರ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಸರ್ಕಾರದ ಅಧೀನ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7) ಶ್ರೀ ಎಸ್.ಎಸ್.ತಡಲಗಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ(ನಿವೃತ್ತ), ಮಿಣಜಗಿ ಗ್ರಾಮ ಪಂಚಾಯತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
8) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.